SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar

UNIVERSITY LIBRARY & LEARNING RESOURCE CENTRE

Online Newspaper Clipping Service

Dtd- Monday, 18th, September– 2017 Pg.No.14

ಉದಯವಾಣಿ

# ವೃತ್ತಿಪರ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಶುಲ್ಕ ವಾಪಸ್

ಬೆಂಗಳೂರು: ವಿವಿಧ ವೃತ್ತಿಪರ ಕೋರ್ಸ್‌ಗಳಿಗೆ ಪ್ರವೇಶ ನೀಡುವ ವೇಳೆ ಹೆಚ್ಚುವರಿಯಾಗಿ ಸಂಗ್ರಹಿಸಿರುವ ಶುಲ್ಕವನ್ನು ವೃತ್ತಿಪರ ಕಾಲೇಜುಗಳು ತಿಂಗಳೊಳಗೆ ವಾರ್ಷಿಕ ಶೇ.18 ಬಡ್ಡಿಯೊಂದಿಗೆ ವಿದ್ಯಾರ್ಥಿಗಳಿಗೆ ವಾಪಸ್ ನೀಡುವಂತೆ ಪ್ರವೇಶ ಮೇಲ್ವಿಚಾರಣಾ ಸಮಿತಿ ಶಿಫಾರಸು ಮಾಡಿದೆ.

ವೃತ್ತಿಪರ ಕಾಲೇಜಿನ ಪ್ರವೇಶ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಆನಂದ ಭೈರಾರೆಡ್ಡಿಯವರ ನೇತೃತ್ವದಲ್ಲಿ ರಚನೆಯಾಗಿದ್ದ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಈ ಶಿಫಾರಸು ಮಾಡಿದೆ.

ಆದರೆ, ಈ ಸಮಿತಿಗೆ ಹೆಚ್ಚುವರಿ ಶುಲ್ಕ ವಸೂಲಿ ಮಾಡುವ ಅಧಿಕಾರ ನೀಡಿಲ್ಲ. ಹೀಗಾಗಿ ಶಿಫಾರಸಿನ ವರದಿಯನ್ನು ಸರ್ಕಾರ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಲ್ಲಿಸಿದೆ. ಸರ್ಕಾರವು ಈ ವರದಿ ಅನುಷ್ಠಾನ ಮಾಡಿದರೆ, ವಿದ್ಯಾರ್ಥಿಗಳು ಹೆಚ್ಚುವರಿಯಾಗಿ ಪಾವತಿಸಿರುವ ಶುಲ್ಕ ಬಡ್ಡಿ ಸಮೇತ ಸಿಗಲಿದೆ.

ಸಮಿತಿಯು 15 ವೈದ್ಯಕೀಯ ಮತ್ತು 15 ದಂತ ವೈದ್ಯಕೀಯ ಕಾಲೇಜುಗಳ ಪಟ್ಟಿಯನ್ನು ಸಿದ್ಧಪಡಿಸಿದೆ. ಯಾವುದಕ್ಕೆ ಎಷ್ಟು ಶುಲ್ಕ ಪಡೆಯಲಾಗುತ್ತಿದೆ ಎಂಬ ಮಾಹಿತಿಯನ್ನು ಪ್ರಕಟಿಸಿದ್ದು, ವಸೂಲಿ ಮಾಡುವ ಜವಾಬ್ದಾರಿಯನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯಕ್ಕೆ ನೀಡಿದೆ.

2017-18ನೇ ಸಾಲಿಗೆ ಖಾಸಗಿ ಕಾಲೇಜಿನ ಸರ್ಕಾರಿ ಕೋಟಾದ ಎಂಜಿನಿಯರಿಂಗ್ ಸೀಟುಗಳಿಗೆ 50,500 ಹಾಗೂ 56,000 ರೂ. ನಿಗದಿಪಡಿಸಿದೆ. ಖಾಸಗಿ ಕಾಲೇಜಿನ ಸರ್ಕಾರಿ ಕೋಟಾದ ವೈದ್ಯಕೀಯ 77,000 ರೂ, ಖಾಸಗಿ ಸೀಟು 6, 32,500 ರೂ, ಬಿ-ಫಾರ್ಮಾ, ಫಾರ್ಮಾ-ಡಿ ಕೋರ್ಸ್‌ಗಳಿಗೆ 21,430 ರೂ. ನಿಗದಿ ಪಡಿಸಿದೆ. ಆದರೆ, ಬಹುತೇಕ ಕಾಲೇಜುಗಳು ಒಬ್ಬೊಬ್ಬ ವಿದ್ಯಾರ್ಥಿಯಿಂದ 15 ಸಾವಿರದಿಂದ ಒಂದು ಲಕ್ಷದ ತನಕವೂ ಹೆಚ್ಚುವರಿ ಶುಲ್ಕ ಪಡೆದಿರುವ ಮಾಹಿತಿ ಇದೆ.